**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಮರಿತಿಬ್ಬೇಗೌಡ, ಶ್ರೀ ಎಸ್.ರವಿ, ಶ್ರೀ ಶಶೀಲ್ ಜಿ ನಮೋಶಿ ಹಾಗೂ ಶ್ರೀ ಅರವಿಂದ ಕುಮಾರ್ ಅರಳಿ ಇವರುಗಳು ನಿಯಮ 330 ರಡಿ ಮಂಡಿಸಿರುವ ಸೂಚನೆಗೆ ಹೇಳಿಕೆ**

**ವಿಷಯ: ಇತ್ತೀಚೆಗೆ ಪೊಲೀಸ್ ಇಲಾಖೆಯಲ್ಲಿ ನಡೆದ ಸುಮಾರು 545 ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹುದ್ದೆಗಳ ನೇಮಕಾತಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ ಕಲಂ 371(ಜೆ) ರ ಅಡಿಯಲ್ಲಿ ಆದ ಅನ್ಯಾಯದ ಬಗ್ಗೆ ಹಾಗೂ ನೇಮಕಾತಿಯಲ್ಲಿ ಎಲೆಕ್ಟ್ರಾನಿಕ್ ಬ್ಲೂಟೂತ್ ಡಿವೈಸ್ ಅನ್ನು ಬಳಸಿ ಅಕ್ರಮ ನಡೆಸಲಾಗಿದೆ ಎಂದು ರಾಜ್ಯಾದ್ಯಂತ ಅಭ್ಯರ್ಥಿಗಳು ಪ್ರತಿಭಟನೆ ಹಾಗೂ ದೂರುಗಳನ್ನು ದಾಖಲಿಸಿರುವುದು ಅನೇಕ ಸುದ್ದಿ ಮಾಧ್ಯಮಗಳ ವರದಿಗಳ ಮೂಲಕ ಬಹಿರಂಗವಾಗಿದೆ. ಇದರ ಬಗ್ಗೆ ಅಭ್ಯರ್ಥಿಗಳು ಕೆಲವು ಶಾಸಕರು ಹಾಗೂ ಸಚಿವರುಗಳ ಮುಂದೆ ತಮಗಾದ ಅನ್ಯಾಯದ ಬಗ್ಗೆ ಚರ್ಚಿಸಿದ್ದಾರೆ ಹಾಗೂ ಈ ಅಕ್ರಮದ ಬಗ್ಗೆ ಸರ್ಕಾರದ ಮಾನ್ಯ ಮುಖ್ಯ ಕಾರ್ಯದರ್ಶಿಗಳ ಗಮನಕ್ಕೆ ತಂದಾಗ ಪ್ರಸ್ತುತ ಹೊರಡಿಸಲಾದ ಆಯ್ಕೆ ಪಟ್ಟಿಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗಿದೆ ಎಂಬುದು ಸಮಾಧಾನಕರವಾದ ಸಂಗತಿ. ಆದರೆ ಇದರ ತನಿಖೆಗಾಗಿ ರಚಿಸಲಾಗಿರುವ ಸಮಿತಿಯು ಇಲ್ಲಿಯವರೆಗೆ ಯಾವುದೇ ವರದಿಯನ್ನು ಕೂಡ ಇಲಾಖೆಗೆ ನೀಡಿರುವುದಿಲ್ಲ. ಈ ವಿಳಂಭದಿಂದಾಗಿ ಜಾತಕಪಕ್ಷಿಗಳಂತೆ ಕಾದು ಕುಳಿತಿರುವ ಬಡ ಪ್ರತಿಭಾವಂತ ಅಭ್ಯರ್ಥಿಗಳು ಜಿಗುಪ್ಸೆಯಲ್ಲಿ ಮುಳುಗಿ ಇಲಾಖೆಯ ಮೇಲಿರುವ ಭರವಸೆಯನ್ನೇ ಕಳೆದುಕೊಳ್ಳುತ್ತಿದ್ದಾರೆ.**

**ಆದ್ದರಿಂದ, ಈ ಬಡ ಅಭ್ಯರ್ಥಿಗಳಿಗೆ ಆಗಿರುವ ಅನ್ಯಾಯವನ್ನು ಸರಿಪಡಿಸಿ ನ್ಯಾಯ ಒದಗಿಸಿಕೊಡುವ ಜವಾಬ್ದಾರಿಯೂ ಇಲಾಖೆಯ ಮೇಲೆ ಇದ್ದು, ಇದೊಂದು ಬಡ ಹಾಗೂ ಪ್ರತಿಭಾವಂತ ಅಭ್ಯರ್ಥಿಗಳ ಭವಿಷ್ಯದ ವಿಷಯವಾಗಿದ್ದು ಈ ನಿಟ್ಟಿನಲ್ಲಿ ಇದರ ಬಗ್ಗೆ ಮಾನ್ಯ ಗೃಹ ಇಲಾಖೆಯ ಗಮನಕ್ಕೆ ತಂದು ನಿಯಮ 330ರ ಅಡಿಯಲ್ಲಿ ಚ್ಚರ್ಚಿಸಲು ಗಮನ ಸೆಳೆಯಲು ಬಯಸುತ್ತೇನೆ.**

## ಸರ್ಕಾರದ ಹೇಳಿಕೆ

ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್)-545 (438 ಎನ್‌ಕೆಕೆ & 107 ಕೆಕೆ) ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 3 ಹೈಕಕೋ 2018, ದಿನಾಂಕ: 6.06.2020ರನ್ವಯ ಕೈಗೊಳ್ಳಲಾಗಿದ್ದು, ಸದರಿ ನಿಯಮಗಳಂತೆ ಆಯ್ಕೆ ಪ್ರಕ್ರಿಯೆಯನ್ನು ನಡೆಸಿ, ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ. ಈ ಕುರಿತು ಕೆಲವು ಅಭ್ಯರ್ಥಿಗಳು ದೂರುಗಳನ್ನು ಸಲ್ಲಿಸಿರುತ್ತಾರೆ. ಸದರಿ ದೂರುಗಳಲ್ಲಿನ ಅಂಶಗಳ ಬಗ್ಗೆ ಹಿರಿಯ ಅಧಿಕಾರಿಗಳು ಪರಿಶೀಲಿಸಿದ್ದು, ಆಯ್ಕೆಯಾದ ಅಭ್ಯರ್ಥಿಗಳು ಅವರುಗಳ ಅರ್ಹತೆಯ ಮೇಲೆ ಅಂಕಗಳನ್ನು ಪಡೆದಿರುವುದು ಕಂಡುಬಂದಿರುತ್ತದೆ. ಹೀಗಾಗಿ ದೂರು ಅರ್ಜಿಗಳಲ್ಲಿ ತಿಳಿಸಿರುವಂತೆ ಯಾವುದೇ ಅಕ್ರಮಗಳು ನಡೆದಿರುವುದಿಲ್ಲ.

ಆದಾಗ್ಯೂ, ಕಲ್ಯಾಣ-ಕರ್ನಾಟಕ ಪ್ರದೇಶದ ಕೆಲವು ಅಭ್ಯರ್ಥಿಗಳು ಹಾಗೂ ಇನ್ನಿತರರು ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ / ಮನವಿಗಳನ್ನು ಸಲ್ಲಿಸಿರುವುದರಿಂದ 545 ಪೊಲೀಸ್ ಸಬ್-ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಪರಿಶೀಲಿಸಲು ಸರ್ಕಾರದ ಆದೇಶ ಸಂಖ್ಯೆ: ಒಇ 21 ಪಿಇಐ 2022, ದಿನಾಂಕ: 15.02.2022ರಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿರುತ್ತದೆ. ಈ ಸಮಿತಿಯು 545 ಪಿ.ಎಸ್.ಐ ಹುದ್ದೆಯ ನೇಮಕಾತಿಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಿಆಸು ಇಲಾಖೆಯು ಕಾಲಕಾಲಕ್ಕೆ ಹೊರಡಿಸಿರುವ ಸುತ್ತೋಲೆಗಳನ್ವಯ ಪರಿಶೀಲಿಸಿ ನೇಮಕಾತಿ ಪ್ರಕ್ರಿಯೆಯನ್ನು ನಡೆಸಲಾಗಿದೆಯೇ? ಎಂಬ ಬಗ್ಗೆ ವರದಿ ಸಲ್ಲಿಸಲು ಸೂಚಿಸಲಾಗಿತ್ತು. ಸದರಿ ಸಮಿತಿಯ ವರದಿಯು ಸಲ್ಲಿಕೆಯಾಗಿದ್ದು, ಸರ್ಕಾರದ ಮಟ್ಟದಲ್ಲಿ ಪರಿಶೀಲನೆಯಲ್ಲಿ ಇರುತ್ತದೆ. ಯಾವುದೇ ಅರ್ಹ ಅಭ್ಯರ್ಥಿಗಳಿಗೆ ಅನ್ಯಾಯವಾಗದಂತೆ ನೇಮಕಾತಿ ಪ್ರಕ್ರಿಯೆಯನ್ನು ನಡೆಸಲಾಗುವುದು.

ಸಂಖ್ಯೆ: ಒಇ 51 ಪಿಇಐ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು